# ಮಕ್ಕಳಿಗೆ ಉಚಿತ ಬ್ಯಾಗ್ ವಿತರಣೆ



ದೊಡ್ಡಬಳ್ಳಾಪುರ: ತಾಲ್ಲೂಕಿನಾದ್ಯಂತ ಮಕ್ಕಳ ಜಾಗೃತಿ ಸಂಸ್ಥೆ ಉತ್ತಮ ಸಮಾಜಮುಖಿ ಕಾರ್ಯಗಳನ್ನು ನಿರ್ವಹಿಸುತ್ತಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯೆ ಗುಲ್ನಾಜ್ ಹೇಳಿದರು.

ಪಾಲನಜೋಗಹಳ್ಳಿ ಅಂಗನವಾಡಿಯಲ್ಲಿ ಮಕ್ಕಳ ಜಾಗೃತಿ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಅಂಗನವಾಡಿ ಮಕ್ಕಳಿಗೆ ಉಚಿತ ಶಾಲಾ ಬ್ಯಾಗ್, ಕಥೆ ಪುಸ್ತಕ, ನೀರಿನ ಬಾಟಲ್ ಗಳನ್ನು ವಿತರಿಸಿ ಮಾತನಾಡಿದರು.

ದೇಶಾದ್ಯಂತ ಎನ್‌ಜಿಒ ಸಂಸ್ಥೆಗಳ ಸೇವೆ ಅಪಾರವಾಗಿದ್ದು ಬಡ ವಿದ್ಯಾರ್ಥಿಗಳ ಶಿಕ್ಷಣ ಸೇವೆಗಳಿಗೆ ಉತ್ತಮ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗುತ್ತಿದೆ ಎಂದರು.

ಉರ್ದು ಶಾಲಾ ಮುಖ್ಯ ಶಿಕ್ಷಕಿ ಶೈಲಜಾ ಮಾತನಾಡಿ, ಸಂಸ್ಥೆ ವತಿಯಿಂದ ಅಂಗನವಾಡಿ ಕೇಂದ್ರಗಳಲ್ಲಿ ಬಾಣಂತಿಯರಿಗೆ ಮಕ್ಕಳ ಪಾಲನೆ ಬಗ್ಗೆ ವಾರಕ್ಕೊಮ್ಮೆ ನಡೆಸುವ ಮಕ್ಕಳ ತಾಯಂದಿರ ಸಭೆಯಿಂದ ಅರಿವು ಮೂಡಿಸುತ್ತಿರುವುದರಿಂದ ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದರು. ಅಂಗನವಾಡಿ ಕಾರ್ಯಕರ್ತೆ ಪಿಳ್ಳಮ್ಮ, ಮಕ್ಕಳ ಜಾಗೃತಿ ಸಂಸ್ಥೆ ಸೇವಾ ಪ್ರತಿನಿಧಿ ಎನ್.ಲತಾ, ಗ್ರಾಮದ ಸ್ತ್ರೀ ಶಕ್ತಿ ಸಂಘದ ಮಹಿಳೆಯರು ಭಾಗವಹಿಸಿದ್ದರು.